ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ

2ನೇ ಗೇಟ್, 6ನೇ ಮಹಡಿ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು– 560 001
ದಿನಾಂಕ 07.02.2017.

ಸಂಖ್ಯೆ: ಇಡಿ: 79: ಪಿಬಿಎಸ್.2017

## ಸುತ್ತೋಲೆ

**ವಿಷಯ: ದಡಾರ–ರುಬೆಲ್ಲಾ ಲಸಿಕಾ ಕಾರ್ಯಕ್ರಮ ಯಶಸ್ವಿಗೊಳಿಸುವ ಕುರಿತು**

ದಿನಾಂಕ: 7.2.2017 ರಿಂದ 28.2.2017 ರವರೆಗೆ ಆರೋಗ್ಯ ಇಲಾಖೆಯು ಕರ್ನಾಟಕ ರಾಜ್ಯದಲ್ಲಿ 9 ತಿಂಗಳಿಂದ 15 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ದಡಾರ–ರುಬೆಲ್ಲಾ ಲಸಿಕೆ (M-R vaccine) ನೀಡುವ ಅಭಿಯಾನ ಹಮ್ಮಿಕೊಂಡಿರುತ್ತದೆ. ಈ ಅಭಿಯಾನದಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಅನುದಾನ ರಹಿತ ಖಾಸಗಿ ಶಾಲೆಗಳು ಸಕ್ರಿಯವಾಗಿ ಭಾಗವಹಿಸಿ, 15 ವರ್ಷದೊಳಗಿನ ಎಲ್ಲಾ ಶಾಲಾ ಮಕ್ಕಳಿಗೆ ಸದರಿ ಲಸಿಕೆಯನ್ನು ನೀಡಲು ಅನುವಾಗುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸಂಪೂರ್ಣ ಸಹಕಾರ ನೀಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರು, ಅಪರ ಆಯುಕ್ತರುಗಳು, ನಿರ್ದೇಶಕರುಗಳು, ವಿಭಾಗೀಯ ಸಹನಿರ್ದೇಶಕರುಗಳು, ಉಪನಿರ್ದೇಶಕರುಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳು, ಗುಚ್ಛ ಸಂಪನ್ಮೂಲ ಸಮನ್ವಯಾಧಿಕಾರಿಗಳು, ಮುಖ್ಯೋಪಾಧ್ಯಾಯರುಗಳು ಹಾಗೂ ಎಲ್ಲಾ ಶಿಕ್ಷಕರಿಗೆ ಸೂಚಿಸಿದೆ.

(ಅಜಯ್ ಸೇಠ್)
ಪ್ರಧಾನ ಕಾರ್ಯದರ್ಶಿ

ಇವರಿಗೆ

1. ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಕೆ.ಆರ್ ವೃತ್ತ, ಬೆಂಗಳೂರು
2. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ, ಗುಲ್ಬರ್ಗಾ
3. ನಿರ್ದೇಶಕರು ಪ್ರಾಥಮಿಕ ಶಿಕ್ಷಣ, ಪ್ರೌಢಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು.
4. ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ಸೂಕ್ತ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ

**ತನ್ವೀರ್ ಸೇಠ್**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಅಲ್ಪಸಂಖ್ಯಾತರ
ಕಲ್ಯಾಣ ಮತ್ತು ವಕ್ಫ್ ಸಚಿವರು
ಹಾಗೂ
ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು

ದೂರವಾಣಿ ಸಂ. 080-22253631
22033897
ಕೊಠಡಿ ಸಂಖ್ಯೆ: 262/262ಎ
ವಿಧಾನಸೌಧ, 2ನೇ ಮಹಡಿ
ಬೆಂಗಳೂರು - 560 001

ಸಂಖ್ಯೆ: ಪ್ರಾಪ್ರೌಶಿಅಜಿ/ 3775 /2017 06-02-2017

## ಟಿಪ್ಪಣಿ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ರಾಜ್ಯದಲ್ಲಿ ದಿನಾಂಕ 7-2-2017 ರಿಂದ 28-02-2017 ರವರೆಗೆ ದಡಾರ-ರುಬೆಲ್ಲಾ ಲಸಿಕಾ ಅಭಿಯಾನವನ್ನು ಹಮ್ಮಿಕೊಂಡಿದ್ದು, 9 ತಿಂಗಳಿನಿಂದ 15 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಒಂದು ದಡಾರ-ರುಬೆಲ್ಲಾ ಲಸಿಕೆಯನ್ನು ನೀಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ, ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಶಾಲೆಗಳು, ಖಾಸಗಿ ಶಾಲೆಗಳು ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಪ್ರೇರೇಪಿಸಲು ಕೋರಿರುವ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಪತ್ರವನ್ನು ಇದರೊಂದಿಗೆ ಲಗತ್ತಿಸಿದೆ.

ರಾಜ್ಯದಲ್ಲಿನ ಸರ್ಕಾರಿ ಶಾಲೆಗಳು, ಖಾಸಗಿ ಶಾಲೆಗಳಲ್ಲಿನ ಎಲ್ಲಾ ಮಕ್ಕಳಿಗೆ ಸದರಿ ಲಸಿಕೆ ನೀಡಲು ಅನುವಾಗುವಂತೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸಂಪೂರ್ಣ ಸಹಕಾರ ನೀಡಿ, ಕಾರ್ಯಕ್ರಮದ ಯಶಸ್ಸಿಗೆ ಎಲ್ಲಾ ರೀತಿಯ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರು, ಅಪರ ಆಯುಕ್ತರುಗಳು, ವಿಭಾಗೀಯ ಜಂಟಿ ನಿರ್ದೇಶಕರುಗಳು, ಜಿಲ್ಲಾ ಉಪನಿರ್ದೇಶಕರುಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿಆರ್‌ಪಿ, ಸಿಆರ್‌ಪಿ, ಶಾಲಾ ಮುಖ್ಯೋಪಾಧ್ಯಾಯರುಗಳಿಗೆ ಸೂಕ್ತ ನಿರ್ದೇಶನ ನೀಡಲು ಸೂಚಿಸಿದೆ.

(ತನ್ವೀರ್ ಸೇಠ್)

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ.